# All India Radio: Bangalore
# National Bulletin In Kannada
# 24.04.2025 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

***************

ಮುಖ್ಯಾಂಶಗಳು

೧. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆ; ಸರ್ವಪಕ್ಷ ಸಭೆ ಪ್ರಗತಿಯಲ್ಲಿ, ವಿವಿಧ ಪಕ್ಷಗಳ ಹಿರಿಯ ನಾಯಕರು ಭಾಗಿ

೨. ೨೦೩೦ರ ವೇಳೆಗೆ ದೇಶದ ಉಕ್ಕಿನ ಉತ್ಪಾದನೆಯನ್ನು ೩೦೦ ಮಿಲಿಯನ್ ಟನ್‌ಗೆ ಹೆಚ್ಚಿಸುವ ಗುರಿ - ಪ್ರಧಾನಮಂತ್ರಿ ನರೇಂದ್ರ ಮೋದಿ

೩. ವಿಶ್ವ ರೋಗನಿರೋಧಕ ಸಪ್ತಾಹ ಇಂದಿನಿಂದ ಜಗತ್ತಿನಾದ್ಯಂತ ಆರಂಭ; ರಾಷ್ಟ್ರೀಯ ಶೂನ್ಯ ದಡಾರ-ರುಬೆಲ್ಲಾ ನಿರ್ಮೂಲನ ಅಭಿಯಾನಕ್ಕೂ ಚಾಲನೆ

೪. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ರಾಜಸ್ಥಾನ ರಾಯಲ್ಸ್ ತಂಡ ಮುಖಾಮುಖಿ.

***************

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಸರ್ವಪಕ್ಷ ಸಭೆ ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿ ನಡೆಯುತ್ತಿದೆ.

ಗೃಹ ಸಚಿವ ಅಮಿತ್ ಶಾ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ.ಪಿ. ನಡ್ಡಾ, ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಡಿಎಂಕೆಯ ತಿರುಚ್ಚಿ ಶಿವ, ಎನ್‌ಸಿಪಿ ನಾಯಕ ಪ್ರಫುಲ್ ಪಟೇಲ್, ಎನ್‌ಸಿಪಿ-ಎಸ್‌ಪಿಯ ಸುಪ್ರಿಯಾ ಸುಳೆ, ಎಸ್‌ಪಿಯ ರಾಮ್ ಗೋಪಾಲ್ ಯಾದವ್, ಆಮ್ ಆದ್ಮಿ ಪಕ್ಷದ ಸಂಜಯ್ ಸಿಂಗ್, ಆರ್‌ಜೆಡಿಯ ಪ್ರೇಮ್ ಚಂದ್ ಗುಪ್ತಾ, ವೈಎಸ್‌ಆರ್‌ಸಿಪಿಯ ಪಿ.ವಿ. ಮಿಥುನ್ ರೆಡ್ಡಿ, ಟಿಎಂಸಿಯ ಸುದೀಪ್ ಬಂಡೋಪಾಧ್ಯಾಯ ಸೇರಿದಂತೆ ಹಲವರು ಸರ್ವಪಕ್ಷ ಸಭೆಯಲ್ಲಿ ಭಾಗವಹಿಸುತ್ತಿದ್ದಾರೆ.

***************

ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಗೃಹ ಸಚಿವ ಅಮಿತ್ ಶಾ ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ಮಧ್ಯಾಹ್ನ ಭೇಟಿ ಮಾಡಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಪಾಕಿಸ್ತಾನದ ವಿರುದ್ಧ ಭಾರತ ತೆಗೆದುಕೊಂಡ ಬಲವಾದ ರಾಜತಾಂತ್ರಿಕ ಕ್ರಮಗಳ ಬೆನ್ನಲ್ಲೇ ಈ ಭೇಟಿ ನಡೆದಿದೆ.

ಏತನ್ಮಧ್ಯೆ, ವಿದೇಶಾಂಗ ಸಚಿವಾಲಯವು ಇಂದು ದೆಹಲಿಯ ಸೌತ್ ಬ್ಲಾಕ್‌ನಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಆಯ್ದ ದೇಶಗಳ ರಾಯಭಾರಿಗಳಿಗೆ ಮಾಹಿತಿ ನೀಡಿತು. ಜರ್ಮನಿ, ಜಪಾನ್, ಪೋಲೆಂಡ್, ಯುಕೆ ಮತ್ತು ರಷ್ಯಾ ಸೇರಿದಂತೆ ರಾಷ್ಟ್ರಗಳ ವಿದೇಶಿ ರಾಯಭಾರಿಗಳಿಗೆ ಭಯೋತ್ಪಾದಕ ದಾಳಿಯ ಕುರಿತು ಮಾಹಿತಿ ನೀಡಲಾಯಿತು.

***************

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಪಾಕಿಸ್ತಾನಿ ಪ್ರಜೆಗಳಿಗೆ ವೀಸಾ ಸೇವೆಗಳನ್ನು ಸ್ಥಗಿತಗೊಳಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಈ ತಿಂಗಳ ೨೭ ರಿಂದಲೇ ಜಾರಿಗೆ ಬರುವಂತೆ ಭಾರತವು ಪಾಕಿಸ್ತಾನದ ಪ್ರಜೆಗಳಿಗೆ ನೀಡಿರುವ ಎಲ್ಲಾ ಮಾನ್ಯ ವೀಸಾಗಳನ್ನು ರದ್ದುಗೊಳಿಸಲಾಗುವುದು. ಇದಲ್ಲದೆ, ನೆರೆಯ ದೇಶದ ನಾಗರಿಕರಿಗೆ ನೀಡಲಾಗುವ ವೈದ್ಯಕೀಯ ವೀಸಾಗಳು ಈ ತಿಂಗಳ ೨೯ ರವರೆಗೆ ಮಾತ್ರ ಮಾನ್ಯವಾಗಿರುತ್ತವೆ.

ಭಾರತದಲ್ಲಿರುವ ಎಲ್ಲಾ ಪಾಕಿಸ್ತಾನ ಪ್ರಜೆಗಳು ವೀಸಾ ಅವಧಿ ಮುಗಿಯುವ ಮೊದಲು ದೇಶವನ್ನು ತೊರೆಯಬೇಕು ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಭಾರತೀಯ ಪ್ರಜೆಗಳು ಪಾಕಿಸ್ತಾನಕ್ಕೆ ಪ್ರಯಾಣಿಸುವುದನ್ನು ತಪ್ಪಿಸುವಂತೆಯೂ ಸೂಚಿಸಿದೆ ಮತ್ತು ಪ್ರಸ್ತುತ ಪಾಕಿಸ್ತಾನದಲ್ಲಿರುವ ಭಾರತೀಯ ಪ್ರಜೆಗಳು ಸಹ ಬೇಗನೆ ಹಿಂತಿರುಗಿ ಬರುವಂತೆ ಹೇಳಲಾಗಿದೆ.

***************

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ನಾಳೆ ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದಾರೆ.

ಸೇನಾ ಮುಖ್ಯಸ್ಥರು ಈ ಪ್ರದೇಶದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕಣಿವೆಯಲ್ಲಿ ಮತ್ತು ನಿಯಂತ್ರಣ ರೇಖೆಯ ಉದ್ದಕ್ಕೂ ಸೇನೆ ತೆಗೆದುಕೊಂಡಿರುವ ಭಯೋತ್ಪಾದಕ ನಿಗ್ರಹ ಕ್ರಮಗಳ ಕುರಿತು ಸ್ಥಳೀಯ ಮಿಲಿಟರಿ ರಚನೆಗಳ ಉನ್ನತ ಕಮಾಂಡರ್‌ಗಳು ಸೇನಾ ಮುಖ್ಯಸ್ಥರಿಗೆ ವಿವರಿಸಲಿದ್ದಾರೆ.

***************

ಭಾರತದ ಉಕ್ಕಿನ ಉದ್ಯಮವು ತನ್ನ ಭವಿಷ್ಯದ ಬಗ್ಗೆ ಹೊಸ ವಿಶ್ವಾಸದಿಂದ ತುಂಬಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಮುಂಬೈನಲ್ಲಿ ನಡೆಯುತ್ತಿರುವ ಇಂಡಿಯಾ ಸ್ಟೀಲ್ - ೬ನೇ ಅಂತಾರಾಷ್ಟ್ರೀಯ ಪ್ರದರ್ಶನ ಮತ್ತು ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ವರ್ಚುವಲ್ ಮೂಲಕ ಮಾತನಾಡಿದ ಅವರು, ೨೦೩೦ರ ವೇಳೆಗೆ ದೇಶದ ಉಕ್ಕಿನ ಉತ್ಪಾದನೆಯನ್ನು ೩೦೦ ಮಿಲಿಯನ್ ಟನ್‌ಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿರುವ ರಾಷ್ಟ್ರೀಯ ಉಕ್ಕು ನೀತಿಯಡಿಯಲ್ಲಿ ನಿಗದಿಪಡಿಸಲಾದ ಮಹತ್ವಾಕಾಂಕ್ಷೆಯ ಗುರಿಗಳನ್ನು ಪ್ರಸ್ತಾಪಿಸಿದರು.

ಪರಿವರ್ತನಾತ್ಮಕ ಪಿಎಂ ಗತಿ ಶಕ್ತಿ - ರಾಷ್ಟ್ರೀಯ ಮಾಸ್ಟರ್ ಪ್ಲಾನ್‌ನಿಂದಾಗಿ ತಲಾವಾರು ಉಕ್ಕಿನ ಬಳಕೆ ೨೦೩೦ರ ವೇಳೆಗೆ ೯೮ ಕೆಜಿಯಿಂದ ೧೬೦ ಕೆಜಿಗೆ ಏರುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ಉಕ್ಕಿನ ಉದ್ಯಮದ ಬೆಳವಣಿಗೆಯ ಅಪಾರ ಉದ್ಯೋಗ ಉತ್ಪಾದನಾ ಸಾಮರ್ಥ್ಯವನ್ನು ಪ್ರಧಾನಿಯವರು ಹೇಳಿದರು. ಖಾಸಗಿ ಮತ್ತು ಸಾರ್ವಜನಿಕ ವಲಯಗಳು ಹೊಸ ವಿಚಾರಗಳನ್ನು ಅಭಿವೃದ್ಧಿಪಡಿಸಲು, ಪೋಷಿಸಲು ಮತ್ತು ಹಂಚಿಕೊಳ್ಳಲು ಅವರು ಕರೆ ನೀಡಿದರು.

ಪ್ರಧಾನಿ ಮೋದಿ "ಶೂನ್ಯ ಆಮದು" ಗುರಿಯ ಅಗತ್ಯವನ್ನು ಮತ್ತು ನಿವ್ವಳ ರಫ್ತುಗಳ ಮೇಲೆ ಗಮನಹರಿಸುವ ಅಗತ್ಯವನ್ನು ಒತ್ತಿ ಹೇಳಿದರು. ಭಾರತವು ಪ್ರಸ್ತುತ ೨೫ ಮಿಲಿಯನ್ ಟನ್ ಉಕ್ಕನ್ನು ರಫ್ತು ಮಾಡುವ ಗುರಿಯತ್ತ ಕೆಲಸ ಮಾಡುತ್ತಿದೆ ಮತ್ತು ೨೦೪೭ ರ ವೇಳೆಗೆ ಉತ್ಪಾದನಾ ಸಾಮರ್ಥ್ಯವನ್ನು ೫೦೦ ಮಿಲಿಯನ್ ಟನ್‌ಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಅವರು ಹೇಳಿದರು.

ದೇಶದ ಯುವಜನರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಉತ್ಪಾದನೆ, ಸಂಶೋಧನೆ ಮತ್ತು ಅಭಿವೃದ್ಧಿ ಮತ್ತು ತಂತ್ರಜ್ಞಾನ ನವೀಕರಣಗಳಲ್ಲಿ ಸಹಯೋಗದ ಬಗ್ಗೆ ಅವರು  ಹೇಳಿದರು.

ಬಳಕೆಯಾಗದ ಹಸಿರು ಕ್ಷೇತ್ರ ಗಣಿಗಳ ಸಮಸ್ಯೆಯನ್ನು ಪರಿಹರಿಸುವ ಪ್ರಾಮುಖ್ಯತೆಯ ಬಗ್ಗೆ ಅವರು ಹೇಳಿದರು. ಕಳೆದ ದಶಕದಲ್ಲಿ ಗಣಿಗಾರಿಕೆಯಲ್ಲಿ ಗಮನಾರ್ಹ ಸುಧಾರಣೆಗಳನ್ನು ಪರಿಚಯಿಸಲಾಗಿದ್ದು, ಇದು ಕಬ್ಬಿಣದ ಅದಿರಿನ ಲಭ್ಯತೆಯನ್ನು ಸುಲಭಗೊಳಿಸುತ್ತದೆ ಎಂದು ಹೇಳಿದರು. ದೇಶದ ಸಂಪನ್ಮೂಲಗಳ ಅತ್ಯುತ್ತಮ ಬಳಕೆಯನ್ನು ಖಚಿತಪಡಿಸಿಕೊಳ್ಳಲು ಹಂಚಿಕೆಯಾದ ಗಣಿಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಸಮಯ ಬಂದಿದೆ ಎಂದು ಅವರು ಹೇಳಿದರು.

****************

ವಿಶ್ವ ಆರೋಗ್ಯ ಸಂಸ್ಥೆ ಆಯೋಜಿಸಿರುವ ೨೦೨೫ರ ವಿಶ್ವ ರೋಗನಿರೋಧಕ ಸಪ್ತಾಹ ಇಂದಿನಿಂದ ಜಗತ್ತಿನಾದ್ಯಂತ ಆರಂಭವಾಗಲಿದೆ. ಒಂದು ವಾರದ ಅಭಿಯಾನವು ಈ ತಿಂಗಳ ೩೦ ರವರೆಗೆ ನಡೆಯಲಿದೆ.

ಈ ವರ್ಷದ ಘೋಷ ವಾಕ್ಯ 'ಪ್ರತಿಯೊಬ್ಬರಿಗೂ ರೋಗನಿರೋಧಕ ಲಸಿಕೆ ಮಾನವೀಯವಾಗಿ ಸಾಧ್ಯ' ಎಂಬುದಾಗಿದೆ. ಇದರಡಿ ಜೀವ ರಕ್ಷಕ ಲಸಿಕೆಗಳನ್ನು ಎಲ್ಲರಿಗೂ ಹಾಕಲಾಗುವುದು. ವಿಶ್ವ ಆರೋಗ್ಯ ಸಂಸ್ಥೆ ಇಂತಹ ಅಗತ್ಯ ಲಸಿಕೆಗಳ ಮೂಲಕ ಕಳೆದ ೫೦ ವರ್ಷಗಳಲ್ಲಿ ಕನಿಷ್ಠ ೧೫ ಕೋಟಿ ೪೦ ಲಕ್ಷ ಜೀವಗಳನ್ನು ಉಳಿಸಲಾಗಿದೆ ಎಂದು ಮಾಹಿತಿ ನೀಡಿದೆ.

****************

ನವದೆಹಲಿಯಲ್ಲಿ ಇಂದು ರಾಷ್ಟ್ರೀಯ ಶೂನ್ಯ ದಡಾರ-ರುಬೆಲ್ಲಾ ನಿರ್ಮೂಲನ ಅಭಿಯಾನ ೨೦೨೫-೨೬ ಅನ್ನು ಪ್ರಾರಂಭಿಸಲಾಯಿತು.

ಈ ಅಭಿಯಾನ ೨೦೨೬ರ ವೇಳೆಗೆ ದಡಾರ ಮತ್ತು ರುಬೆಲ್ಲಾವನ್ನು ನಿರ್ಮೂಲನೆ ಮಾಡುವ ಭಾರತದ ಗುರಿಯತ್ತ ಮಹತ್ವದ ಹೆಜ್ಜೆಯಾಗಿದೆ. ಈ ಅಭಿಯಾನವನ್ನು ವರ್ಚುವಲ್ ಮೂಲಕ ಪ್ರಾರಂಭಿಸಿದ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ ನಡ್ಡಾ, ಮಕ್ಕಳಿಗೆ ಎರಡು ಡೋಸ್‌ಗಳ ದಡಾರ ಮತ್ತು ರುಬೆಲ್ಲಾ ಲಸಿಕೆಯನ್ನು ನೀಡುವ ಮೂಲಕ ೧೦೦ ಪ್ರತಿಶತ ರೋಗನಿರೋಧಕ ವ್ಯಾಪ್ತಿಯನ್ನು ಸಾಧಿಸಲು ಈ ಅಭಿಯಾನ ಅವಕಾಶವನ್ನು ಒದಗಿಸಲಿದೆ  ಎಂದು ಹೇಳಿದರು.

ಈ ವರ್ಷದ ಜನವರಿಯಿಂದ ಮಾರ್ಚ್ ಅವಧಿಯಲ್ಲಿ ದೇಶದಲ್ಲಿನ ೩೩೨ ಜಿಲ್ಲೆಗಳು ಶೂನ್ಯ ದಡಾರ ಪ್ರಕರಣಗಳನ್ನು ವರದಿ ಮಾಡಿವೆ ಮತ್ತು ೪೮೭ ಜಿಲ್ಲೆಗಳು ಶೂನ್ಯ ರುಬೆಲ್ಲಾ ಪ್ರಕರಣಗಳನ್ನು ವರದಿ ಮಾಡಿವೆ ಎಂದು ಅವರು ಮಾಹಿತಿ ನೀಡಿದರು.

ದಡಾರ ಮತ್ತು ರುಬೆಲ್ಲಾ ವಿರುದ್ಧ ಲಸಿಕೆ ಹಾಕುವ ಬಗ್ಗೆ ಜಾಗೃತಿ ಮೂಡಿಸಲು ಎಲ್ಲಾ ಶಾಸಕರು, ಸಂಸದರು, ಸ್ಥಳೀಯ ಮತ್ತು ಪಂಚಾಯತ್ ಮುಖ್ಯಸ್ಥರ ಸಮಗ್ರ ಭಾಗವಹಿಸುವಿಕೆಗಾಗಿ ಸಚಿವರು ಹಾಗೂ ರಾಜ್ಯಗಳಿಗೆ ಕರೆ ನೀಡಿದರು.

ದಡಾರ ಮತ್ತು ರುಬೆಲ್ಲಾ ಹೆಚ್ಚು ಸಾಂಕ್ರಾಮಿಕ ಕಾಯಿಲೆಗಳಾಗಿದ್ದು, ಈ ಗಂಭೀರ ಕಾಯಿಲೆಗಳು, ಜೀವಿತಾವಧಿಯ ತೊಡಕುಗಳು ಮತ್ತು ಸಾವಿಗೆ ಕಾರಣವಾಗಬಹುದು.

ಸಾರ್ವತ್ರಿಕ ರೋಗನಿರೋಧಕ ಕಾರ್ಯಕ್ರಮದಡಿಯಲ್ಲಿ, ೯ ರಿಂದ ೧೨ ತಿಂಗಳು ಮತ್ತು ೧೬ ರಿಂದ ೨೪ ತಿಂಗಳ ವಯಸ್ಸಿನ ಎಲ್ಲಾ ಅರ್ಹ ಮಕ್ಕಳಿಗೆ ಎರಡು ಡೋಸ್‌ಗಳ ದಡಾರ-ರುಬೆಲ್ಲಾ ಲಸಿಕೆಯನ್ನು ಉಚಿತವಾಗಿ ನೀಡಲಾಗುತ್ತದೆ. ಕಳೆದ ವರ್ಷ, ೨೦೨೩ ಕ್ಕೆ ಹೋಲಿಸಿದರೆ ಭಾರತವು ದಡಾರ ಪ್ರಕರಣಗಳಲ್ಲಿ ಶೇಕಡಾ ೭೩ ರಷ್ಟು ಗಮನಾರ್ಹ ಇಳಿಕೆ ಮತ್ತು ರುಬೆಲ್ಲಾ ಪ್ರಕರಣಗಳಲ್ಲಿ ಶೇಕಡಾ ೧೭ ರಷ್ಟು ಇಳಿಕೆಯನ್ನು ದಾಖಲಿಸಿದೆ.

****************

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಿಹಾರಕ್ಕೆ ಭೇಟಿ ನೀಡಿದ್ದು, ರಾಷ್ಟ್ರೀಯ ಪಂಚಾಯತ್ ರಾಜ್ ದಿನದಲ್ಲಿ ಭಾಗಿಯಾದರು. ಈ ವೇಳೆ ಅವರು ೧೩ ಸಾವಿರದ ೪೮೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಿಲಾನ್ಯಾಸ ನೆರವೇರಿಸಿದರು.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯಲ್ಲಿ ಹತರಾದವರಿಗೆ ಮೌನಾಚರಣೆ ಮೂಲಕ ಗೌರವ ಸಲ್ಲಿಸಿ ತಮ್ಮ ಭಾಷಣ ಆರಂಭಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಭಾರತವು ಪ್ರತಿಯೊಬ್ಬ ಭಯೋತ್ಪಾದಕ ಮತ್ತು ಅವರ ಬೆಂಬಲಿಗರನ್ನು ಪತ್ತೆಹಚ್ಚಿ ಶಿಕ್ಷಿಸುತ್ತದೆ ಎಂದು ಹೇಳಿದರು.

ಭಯೋತ್ಪಾದನೆ ನಿಗ್ರಹಕ್ಕೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು, ಈ ನಿಟ್ಟಿನಲ್ಲಿ ದೇಶದ ಸಂಕಲ್ಪ ದೃಢವಾಗಿದೆ ಎಂದು ಅವರು ಹೇಳಿದರು. ಭಯೋತ್ಪಾದನೆಯಿಂದ ದೇಶದ ಚೈತನ್ಯ ಎಂದಿಗೂ ಕುಗ್ಗುವುದಿಲ್ಲ, ಮಾನವೀಯತೆಯಲ್ಲಿ ನಂಬಿಕೆಯಿಡುವ ಪ್ರತಿಯೊಬ್ಬರೂ ಭಾರತದೊಂದಿಗಿದ್ದಾರೆ ಎಂದು ಅವರು ಈ ಸಂದರ್ಭದಲ್ಲಿ ಪ್ರತಿಪಾದಿಸಿದರು.

ಭಾರತದೊಂದಿಗೆ ಒಗ್ಗಟ್ಟನ್ನು ತೋರಿಸುತ್ತಿರುವ ವಿಶ್ವ ಮತ್ತು ಜಾಗತಿಕ ನಾಯಕರಿಗೆ ಅವರು ಧನ್ಯವಾದ ಅರ್ಪಿಸಿದರು. ಈ ದಾಳಿ ಕೇವಲ ಪ್ರವಾಸಿಗರ ಮೇಲೆ ಅಷ್ಟೇ ಅಲ್ಲ, ದೇಶದ ಆತ್ಮಸ್ಥೈರ್ಯದ ಮೇಲೆ ಎಂದು ಅವರು ಹೇಳಿದರು.

ದೇಶದ ೧೪೦ ಕೋಟಿ ಜನರ ಇಚ್ಛಾಶಕ್ತಿಯೊಂದಿಗೆ ನಾವು ಭಯೋತ್ಪಾದನೆಯನ್ನು ಕಡಿಮೆ ಮಾಡುತ್ತೇವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

****************

ಸರ್ಕಾರಿ ಆಯುರ್ವೇದ ಆಸ್ಪತ್ರೆ ಇಂದಿರಾನಗರ ಇವರ ಆಶ್ರಯದಲ್ಲಿ ಬೆಂಗಳೂರು ಆಕಾಶವಾಣಿ ಆವರಣದಲ್ಲಿ ಇಂದು ಆರೋಗ್ಯ ಶಿಬಿರ ಏರ್ಪಡಿಸಲಾಗಿತ್ತು. ತಜ್ಞ ವೈದ್ಯರು ಸಿಬ್ಬಂದಿಗೆ ಆರೋಗ್ಯ ಸಲಹೆ ನೀಡಿದರು.

****************

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಪಂದ್ಯಾವಳಿಯಲ್ಲಿಂದು ಅತಿಥೇಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ರಾಜಸ್ಥಾನ ರಾಯಲ್ಸ್ ತಂಡ ಮುಖಾಮುಖಿಯಾಗಿದೆ.

ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ತಂಡ ಪೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಇತ್ತೀಚಿನ ವರದಿ ಬಂದಾಗ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡ ೦.೪ ಓವರ್‌ಗಳಲ್ಲಿ ಯಾವುದೇ ವಿಕೆಟ್‌ವಿಲ್ಲದೇ ೭ ರನ್ ಗಳಿಸಿ ಆಡುತ್ತಿದೆ.

********ಮುಕ್ತಾಯ*******